ಕ್ರ. ಸಂ.	ಗ್ರಾಮ/ಹೋಬಳಿ	ಸ.ನಂ.	ಒತ್ತುವರಿಯಾಗಿರುವ ವಿಸ್ತೀರ್ಣ ಎ.ಗುಂ.	ಒತ್ತವರಿ ತೆರವು ಗೊಳಿಸಿರುವ ವಿಸ್ತೀರ್ಣ ಎ.ಗುಂ.
21	ಕರಾಜೇನಹಳ್ಳಿ	11	0.25	–
22	ಪಟ್ರೇನಹಳ್ಳಿ	16	0.11	–
23	ಪಾಂಡ್ರಮರದಹಳ್ಳಿ	98	6.11	–
	ಒಟ್ಟು	–	**63.00**	**17.18**

ಐ.ಟಿ.ಐ. ಕಾಲೇಜು ಕಟ್ಟಡ

38(150) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) ಮಾನ್ಯ ಕಾರ್ಮಿಕ ಮತ್ತು ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಮನಗರ ಜಿಲ್ಲೆಯ ಮಾಗಡಿ ಸರ್ಕಾರಿ ಕೈಗಾರಿಕಾ ತರಬೇತಿ ಕಾಲೇಜಿಗೆ ಸ್ವಂತ ಕಟ್ಟಡವಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಾಲೇಜಿನ ಕಟ್ಟಡವನ್ನು ನಿರ್ಮಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು;

ಇ) ಎಷ್ಟು ಕೊಠಡಿಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ಹಾಗೂ ಎಷ್ಟು ಹಣವನ್ನು ಎಂದು ಬಿಡುಗಡೆ ಮಾಡಲಾಗುವುದು ಕೊಠಡಿಗಳ ನಿರ್ಮಾಣಕ್ಕೆ ಎಷ್ಟು ಕಾಲಮಿತಿಯನ್ನು ನಿಗದಿಪಡಿಸಲಾಗಿದೆ?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಮತ್ತು ರೇಷ್ಮೆ ಸಚಿವರು)

ಅ) ಹೌದು.

ಆ) ಕೈಗಾರಿಕಾ ತರಬೇತಿ ಸಂಸ್ಥೆಯ ಸ್ವಂತ ಕಟ್ಟಡ ನಿರ್ಮಾಣದ ಸಲುವಾಗಿ ನಿವೇಶನ ಪಡೆಯಲು ಕಂದಾಯ ಇಲಾಖೆಯವರೊಡನೆ ವ್ಯವಹರಿಸಲಾಗುತ್ತಿದೆ.

ಇ) ಕಂದಾಯ ಇಲಾಖೆಯಿಂದ ನಿವೇಶನ ದೊರೆತ ನಂತರ ಸದರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ವೃತ್ತಿಗಳಿಗೆ ಡಿಜಿಇಟಿ

ನಿಯಮಾವಳಿಗಳ ಅನ್ವಯ ತರಬೇತಿಗೆ ಅಗತ್ಯವಾದಷ್ಟು ಕಟ್ಟಡವನ್ನು ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಮಾಗಡಿ ಕೆಂಪೇಗೌಡ ಕೋಟೆ

40(152) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಖಾತೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪುರಾತನ ಮಾಗಡಿ ಕೆಂಪೇಗೌಡ ಕೋಟೆಯ ಪುನರುಜ್ಜೀವನ ಕಾಮಗಾರಿಯು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ;

ಆ) ಹಾಗಿದ್ದಲ್ಲಿ, ಈ ಕೋಟೆಯ ಕಾಮಗಾರಿಯನ್ನು ಪೂರ್ಣಗೊಳಿಸಲು ಬೇಕಾಗಿರುವ ಅಂದಾಜು ಮೊತ್ತವೆಷ್ಟು; ಇಲ್ಲಿಯವರೆಗೆ ಈ ಕಾಮಗಾರಿಗಾಗಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ; ಎಷ್ಟು ಹಣ ಖರ್ಚು ಮಾಡಲಾಗಿದೆ; (ವಿವರ ನೀಡುವುದು)

ಇ) ಕೋಟೆ ಪುನರುಜ್ಜೀವನ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರವು ನಿಗದಿಪಡಿಸಿರುವ ಕಾಲಮಿತಿ ಎಷ್ಟು; ಉಳಿಕೆ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುತ್ತದೆ; ಈ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಖಾತೆ ಸಚಿವರು)

ಅ) ಬಂದಿದೆ.

ಆ) ಕರ್ನಾಟಕ ಸರ್ಕಾರದಿಂದ ಮಾಗಡಿ ಕೋಟೆಯ ಪ್ರವೇಶ ದ್ವಾರ ಹಾಗೂ ದಕ್ಷಿಣ ಭಾಗದ ಕೋಟೆ ಗೋಡೆಯ ಪುನರ್ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಲು ಈಗಾಗಲೇ ಬಿಡುಗಡೆಯಾಗಿರುವ ಅನುದಾನ ರೂ. 300.00 ಲಕ್ಷಗಳು ಇದರಲ್ಲಿ ಇದುವರೆಗೆ ಆಗಿರುವ ವೆಚ್ಚ ರೂ. 269.00 ಲಕ್ಷಗಳು. ಮಾಗಡಿ ಕೋಟೆಯ ಸಂರಕ್ಷಣಾ ಕಾಮಗಾರಿಯನ್ನು ಪೂರ್ಣಗೊಳಿಸಲು ಪ್ರವಾಸೋದ್ಯಮ ಇಲಾಖೆಯಿಂದ ಕೇಂದ್ರ ಸರ್ಕಾರಕ್ಕೆ ರೂ. 16.00 ಕೋಟಿಗಳಿಗೆ. ಅಂದಾಜು ಪಟ್ಟಿಯನ್ನು ಸಲ್ಲಿಸಲಾಗಿದೆ. ಆದರೆ ಅನುದಾನ ಬಿಡುಗಡೆಯಾಗಿರುವುದಿಲ್ಲ.